## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 307 (365)

ಸದಸ್ಯರ ಹೆಸರು : ಶ್ರೀ ಹೆಚ್.ಎಂ. ರೇವಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸುವವರು : ಮಾನ್ಯ ಕಂದಾಯ, ಕೌಶಲ್ಯ ಅಭಿವೃದ್ಧಿ ಮತ್ತು ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವರು

ಉತ್ತರಿಸಬೇಕಾದ ದಿನಾಂಕ : 12.12.2018

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| 1 | 2018-19ನೇ ಸಾಲಿಗೆ ರಾಜ್ಯದಲ್ಲಿ ಎಷ್ಟು ತಾಲ್ಲೂಕುಗಳನ್ನು ಸರ್ಕಾರ ಬರಪೀಡಿತ ಪ್ರದೇಶಗಳೆಂದು ಘೋಷಣೆ ಮಾಡಿದೆ; | ರಾಜ್ಯದಲ್ಲಿ 2018-19ನೇ ಸಾಲಿನಲ್ಲಿ ಒಟ್ಟು 100 ತಾಲ್ಲೂಕುಗಳನ್ನು ಬರ ಪೀಡಿತ ಪ್ರದೇಶಗಳೆಂದು ಘೋಷಿಸಲಾಗಿದೆ. |
| 2 | ಈ ಪ್ರದೇಶಗಳಲ್ಲಿ ಕುಡಿಯುವ ನೀರಿಗೆ ಸಮಸ್ಯೆಯಾಗದಂತೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ತುರ್ತು ಕುಡಿಯುವ ನೀರಿನ ಸಮಸ್ಯೆ ಬಗೆಹರಿಸಲು ಪ್ರತಿ ತಾಲ್ಲೂಕಿಗೆ ರೂ.50.00 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ ಹಾಗೂ ಕ್ರಿಯಾ ಯೋಜನೆಯನ್ನು ತಯಾರಿಸಿಲು ಸೂಚಿಸಿದೆ. ಈ ಹಣದಲ್ಲಿ ತೀವ್ರ ಅನಿವಾರ್ಯವಿರುವ ಕಡೆ ಮಾತ್ರ ಭೂ ವಿಜ್ಞಾನಿಗಳ ಸಲಹೆ ಮೇರೆಗೆ ಹೊಸ ಬೋರ್ ವೆಲ್‌ಗಳನ್ನು ಕೊರಸಿ ಸಾರ್ವಜನಿಕ ಉಪಯೋಗಕ್ಕಾಗಿ ನೀಡಲಾಗುತ್ತಿದೆ. ಇದಲ್ಲದೆ ಕೊಳವೆ ಬಾವಿ ಸ್ವಚ್ಛಗೊಳಿಸುವುದು, ಹೋಡ್ರೋಫ್ಯಾಕ್ಚರಿಂಗ್ ಗೊಳಿಸುವುದು, ಪಂಪ್ ಫ್ಲಶಿಂಗ್, ಮೋಟಾರ್ ಅಳವಡಿಸುವುದು, ಪೈಪ್‌ಲೈನ್ ವಿಸ್ತರಣೆ, ವಿದ್ಯುತ್, ಸಂಪರ್ಕದಂತಹ ಸಣ್ಣ ಪ್ರಮಾಣದ ಕಾಮಗಾರಿಗಳನ್ನು ಸಧ್ಯದ ನೀರಿನ ಬವಣೆಗಳನ್ನು ನೀಗಿಸಲು ಅನುಷ್ಠಾನಗೊಳಿಸಬಹುದು ಹಾಗೂ ಖಾಸಗಿ ಬೋರ್ ವೆಲ್‌ಗಳ ಸೇವೆ ಪಡೆಯುವಂತಹ ಕ್ರಮಗಳಿಗೆ ಈ ಅನುಧಾನವನ್ನು ಉಪಯೋಗಿಸಲು ಸೂಚಿಸಿದೆ.<br>ರಾಜ್ಯದ್ಯಾಂತ 209 ಗ್ರಾಮಗಳಿಗೆ 409 ಟ್ಯಾಂಕರ್ ಗಳ ಮೂಲಕ ಹಾಗೂ 382 ಖಾಸಗಿ ಬೋರ್ ವೆಲ್‌ಗಳನ್ನು ಬಾಡಿಗೆ ಮೂಲಕ ಕುಡಿಯುವ ನೀರನ್ನು ಸರಬರಾಜು ಮಾಡಲಾಗುತ್ತಿದೆ. |
| 3 | ಈ ತಾಲ್ಲೂಕುಗಳಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸಲು ಇಲಾಖೆಯಿಂದ ತ್ವರಿತ ಕ್ರಮ ಕೈಗೊಳ್ಳಲಾಗಿದೆಯೇ; | ಈ ತಾಲ್ಲೂಕುಗಳಲ್ಲಿ ಈಗಾಗಲೇ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸಿರುತ್ತದೆ. ಜಲಮೂಲ, ನೀರಿನ ಗುಣಮಟ್ಟ ಹಾಗೂ ಅವಶ್ಯಕತೆಯ ಆಧಾರದ ಮೇಲೆ ಹೆಚ್ಚುವರಿಯ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಅನುಧಾನದ ಲಭ್ಯತೆಯ ಮೇಲೆ ಸ್ಥಾಪಿಸಲು ಕ್ರಮ ಕೈಗೊಳ್ಳಲಾಗುತ್ತದೆ. |

| | | |
|---|---|---|
| 4 | ಕೇಂದ್ರ ಸರ್ಕಾರದಿಂದ ರಾಜ್ಯ ಬರ ಪೀಡಿತ ಪ್ರದೇಶಗಳಿಗೆ ಅನುದಾನ ಬಿಡುಗಡೆ ಮಾಡಲಾಗಿದೆಯೇ? | ಬರ ಪರಿಹಾರ ಕಾರ್ಯಗಳಿಗಾಗಿ ರೂ.2334.00 ಕೋಟಿಗಳ ನೆರವು ಕೋರಿ ಕೇಂದ್ರ ಸರ್ಕಾರಕ್ಕೆ Memorandum ಸಲ್ಲಿಸಲಾಗಿದ್ದು, ಕೇಂದ್ರ ಸರ್ಕಾರದಿಂದ ಅನುದಾನ ನಿರೀಕ್ಷಿಸಿದೆ.<br>ರಾಜ್ಯ ಸರ್ಕಾರದ ಕಂದಾಯ ಇಲಾಖೆಯಿಂದ ಬರ ಪರಿಹಾರ ಕಾರ್ಯಗಳಿಗಾಗಿ ರೂ.126.00 ಕೋಟಿಗಳನ್ನು ಬಿಡುಗಡೆ ಮಾಡಲಾಗಿದೆ. ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯಿಂದ ಪ್ರತೀ ಬರ ಪೀಡಿತ ತಾಲ್ಲೂಕಿಗೆ ರೂ.50.00 ಲಕ್ಷಗಳನ್ನು ತುರ್ತು ಕುಡಿಯುವ ನೀರು ಸರಬರಾಜು ಕಾಮಗಾರಿಗಳಿಗೆ ಮಂಜೂರು ಮಾಡಲಾಗಿದೆ. |

ಕಂಇ 275 ಟಿಎನ್‌ಆರ್ 2018

(ಆರ್.ವಿ. ದೇಶಪಾಂಡೆ)
ಕಂದಾಯ, ಕೌಶಲ್ಯ ಅಭಿವೃದ್ಧಿ ಮತ್ತು ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವರು